ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

# ಪತ್ರಿಕಾ ತುಣುಕುಗಳು
# PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: 

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯವಾಣಿ    ದಿನಾಂಕ : DATE : 04/07/2019

## ರಾಜ್ಯಪಾಲರಿಗಲ್ಲ, ರಾಷ್ಟ್ರಪತಿಗೂ ನೀಡಲಿ

ಶಾಸಕರು ರಾಜ್ಯಪಾಲರಿಗೋ, ಇನ್ಯಾರಿಗೋ ರಾಜೀನಾಮೆ ಕೊಟ್ಟರೆ ಆಗುವುದಿಲ್ಲ. ಬೇಕಿದ್ದರೆ ರಾಷ್ಟ್ರಪತಿಗೂ ರಾಜೀನಾಮೆ ಕೊಟ್ಟು ಕೊಳ್ಳಲಿ ಎಂದು ಸ್ಪೀಕರ್ ರಮೇಶ್‌ಕುಮಾರ್, ಇಬ್ಬರು ಅತೃಪ್ತ ಶಾಸಕರ ನಡೆಗೆ ಸಿಡಿಮಿಡಿಗೊಂಡರು.



ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಚುನಾಯಿತ ಪ್ರತಿನಿಧಿಯನ್ನು ತಿರಸ್ಕರಿಸುವ ಅಧಿಕಾರ ಮತದಾರರಿಗಿಲ್ಲ. ಜನಪ್ರತಿನಿಧಿಗಳು ಹೆಚ್ಚು ಜವಾಬ್ದಾರಿಯುತವಾಗಿ ನಡೆದುಕೊಳ್ಳುತ್ತಾರೆ ಎಂಬ ಆಶಯ ಸಂವಿಧಾನ ರಚಿಸಿದವರಿಗಿತ್ತು. ಆದರೆ ಈಗ ಪರಿಸ್ಥಿತಿ ಭಿನ್ನವಾಗಿದೆ. ಹೀಗಾಗಿ ರಾಜೀನಾಮೆ ಕೊಟ್ಟಿರುವ ಬಗ್ಗೆ ಸಾರ್ವಜನಿಕ ಅಭಿಪ್ರಾಯ ಸಂಗ್ರಹಿಸುವ ಸಂದರ್ಭ ಒದಗಿಬಂದಿದೆ. ಆಕ್ಷೇಪಣೆ ಸಲ್ಲಿಸುವಂತೆ ನಾನಾಗಿ ಕೇಳುವುದಿಲ್ಲ ಎಂದರು.